**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ,**

**ಪಿರಿಯಾಪಟ್ಟಣ.**

**ಸಿ ಸಿ ಸಂಃ 441/2023**

| | | |
|---|---|---|
| ಸಾಕ್ಷಿಯ ಹೆಸರುಃ | ಪುಟ್ಟರಾಜು | ಫ್ರಾಸಾಃಃ 2 |
| ತಂದೆ ಹೆಸರುಃ | ಬಸವಲಿಂಗೇಗೌಡ | ಚಾಸಾಃಃ 3 |
| ವಯಸ್ಸುಃ | 42 ವರ್ಷ | ಪ್ರಮಾಣೀಕರಿಸಿದ<br>ದಿಃ 16/12/2024 |
| ಉದ್ಯೋಗಃ | ವ್ಯವಸಾಯ | |
| ವಾಸ ಸ್ಥಳಃ | ರಾಜನಬಿಳಗುಲಿ ಗ್ರಾಮ,<br>ಪಿರಿಯಾಪಟ್ಟಣ ತಾಲ್ಲೂಕು. | |

**ಮುಖ್ಯ ವಿಚಾರಣೆಃ** ಮಾನ್ಯ **ಸಸಅ ರಿಂದಃ**

ಚಾಸಾ–2 ಗೊತ್ತು. ಆರೋಪಿತ ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಏನೂ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾರನ್ನೂ ದಸ್ತಗಿರಿ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿಲ್ಲ. ನಾನು ಯಾವುದೋ ಕೆಲಸದ ನಿಮಿತ್ತ ಪೊಲೀಸ್ ಠಾಣೆಗೆ ಹೋಗಿದ್ದಾಗ ಪೊಲೀಸರು ನನ್ನ ಸಹಿಯನ್ನು ಒಂದು ದಾಖಲೆಯ ಮೇಲೆ ಪಡೆದುಕೊಂಡಿರುತ್ತಾರೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ನಿಪಿ.1 ಮಹಜರ್ ನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.1(ಬಿ)** ಎಂದು ಗುರುತಿಸಲಾಯಿತು. ಸಾಕ್ಷಿಯು ನಿಪಿ.2–ಮಾದರಿ ಸೀಲಿನಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು **ನಿಪಿ.2(ಬಿ)** ಎಂದು ಗುರುತಿಸಲಾಯಿತು. ನಾನು ಪೊಲೀಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

**(ಈ ಸಮಯದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿ ಕೋರುತ್ತಾರೆ. ಅನುಮತಿ ನೀಡಲಾಯಿತು.)**

**ಪಾಟೀ ಸವಾಲುಃ ಸಸಅ ರವರಿಂದಃ**

ಈಗ ನನಗೆ ಓದಿ ಹೇಳಿದಂತೆ ''ದಿನಾಂಕಃ30/03/2023 ರಂದು ............................ ಈ ಮಹಜರನ್ನು ಬೆಳಿಗ್ಗೆ 9.45 ರಿಂದ 11.00 ಗಂಟೆಯವರೆಗೆ ಸ್ಥಳದಲ್ಲಿಯೇ ಬರೆಯಲಾಯಿತು'' ಎಂದು ನಿಪಿ.1 ರಂತೆ ಮಹಜರ್ ಕ್ರಮ ಜರುಗಿಸಲಾಯಿತು ಎಂದರೆ ಸರಿಯಲ್ಲ. ಸದರಿ ಮಹಜರ್ ಗೆ ನಾನು ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ಈಗ ನನಗೆ ಓದಿ ಹೇಳಿದಂತೆ '' ನಾನು ಮೇಲ್ಕಂಡ ವಿಳಾಸದಲ್ಲಿ ..................... ಆಸಾಮಿಯನ್ನು ನೋಡಿದರೆ ಗುರ್ತಿಸುತ್ತೇನೆ'' ಎಂದು ಪೊಲೀಸರ ಮುಂದೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸದರಿ ಹೇಳಿಕೆಯನ್ನು **ನಿಪಿ.4** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ** ಇಲ್ಲ.

**ಮರು ವಿಚಾರಣೆಃ** ಇಲ್ಲ.

**ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಬೆರಳಚ್ಚು ಮಾಡಲಾಯಿತು**
**ಓದಿ ಹೇಳಿ ಕೇಳಿ ಸರಿ ಇದೆ ಎಂದು ಸಾಕ್ಷಿ ಒಪ್ಪಿಕೊಂಡಿರುತ್ತಾರೆ.**

**ಹೆಚ್.ಸಿ.ನ್ಯಾ ಹಾಗೂ ಪ್ರ.ದ.ನ್ಯಾದಂ.**
**ಪಿರಿಯಾಪಟ್ಟಣ.**